**ಕರ್ನಾಟಕ ಸರ್ಕಾರ**

ಸಂಖ್ಯೆ: ಕಂಇ 258 ಟಿಎನ್‌ಆರ್ 2024

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:08.08.2024.

**ಸರ್ಕಾರದ ಆದೇಶ ಸಂಖ್ಯೆ: ಕಂಇ 258 ಟಿಎನ್‌ಆರ್ 2024, ದಿನಾಂಕ: 01.08.2024 ಕ್ಕೆ ಪರಿಷ್ಕೃತ ಸೇರ್ಪಡೆ ಆದೇಶ.**

2024-25 ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ (1ನೇ ಜೂನ್ ರಿಂದ 30ನೇ ಸೆಪ್ಟೆಂಬರ್ ರವರೆಗೆ) ಉಂಟಾಗುವ ಅತಿವೃಷ್ಟಿ / ಪ್ರವಾಹದಿಂದ ಹಾನಿಯಾದ ಮನೆಗಳ ಪುನರ್ ನಿರ್ಮಾಣ / ದುರಸ್ಥಿ ಕಾರ್ಯ ಹಾಗೂ ಪ್ರವಾಹದಿಂದಾಗಿ ಮನೆಯ ಗೃಹೋಪಯೋಗಿ ವಸ್ತುಗಳನ್ನು ಕಳೆದುಕೊಂಡ ಸಂತ್ರಸ್ಥರಿಗೆ ಪರಿಹಾರವನ್ನು ನೀಡುವ ಕುರಿತು ಸರ್ಕಾರದ ಆದೇಶ ಸಂಖ್ಯೆ: ಕಂಇ 258 ಟಿಎನ್‌ಆರ್ 2024, ದಿನಾಂಕ: 01.08.2024 ರಲ್ಲಿ ನಿಗದಿಪಡಿಸಿರುವ ಪರಿಹಾರ ಮೊತ್ತವನ್ನು ಈ ಕೆಳಕಂಡಂತೆ ಪಾವತಿಸಲು ನಿರ್ದೇಶನಗಳನ್ನು ನೀಡಲಾಗಿದೆ;

1. ಸರ್ಕಾರದ ದಿನಾಂಕ: 01.08.2024 ರ ಆದೇಶದ ಕ್ರ.ಸಂ: 04 ರಲ್ಲಿ ತಿಳಿಸಿರುವಂತೆ **ಭಾಗಶಃ ಹಾನಿಗೊಳಗಾದ** ಮನೆಗಳ ದುರಸ್ಥಿಗೆ **ಕನಿಷ್ಟ ರೂ.6,500/- ಗಳಿಂದ ಗರಿಷ್ಟ ರೂ.50,000/-ಗಳನ್ನು** ಈ ಕೆಳಕಂಡಂತೆ ಪಾರದರ್ಶಕ ಮಾನದಂಡಗಳನ್ವಯ ಅರ್ಹತೆಯನುಸಾರ ಪಾವತಿಸುವುದು;

| ಕ್ರ. ಸಂ. | ಮನೆ ಹಾನಿಯ ಪ್ರಮಾಣ | ವಿವರಣೆ | ಪಾವತಿಸಬೇಕಾಗಿರುವ ಮೊತ್ತ |
|---|---|---|---|
| 1 | ಅತೀ ಸಣ್ಣ ಪ್ರಮಾಣದ ಮನೆ ಹಾನಿ (ಶೇ.15% ಕ್ಕಿಂತ ಮೇಲ್ಪಟ್ಟು ಹಾಗೂ ಶೇ.20% ಕ್ಕಿಂತ ಕಡಿಮೆ) | ಮನೆಯ ಮೇಲ್ಛಾವಣಿಯ ಹಂಚು/ಶೀಟುಗಳ, ಬಾಗಿಲು & ಕಿಟಕಿಗಳ ಹಾನಿ ಹಾಗೂ ಇನ್ನಿತರೆ ಸಣ್ಣ ಪುಟ್ಟ ಹಾನಿ. | **ರೂ.6,500/-** (ಕೇಂದ್ರ ಗೃಹ ಮಂತ್ರಾಲಯದ Revised Items and Norms of assistance ನ ಕುರಿತು ದಿನಾಂಕ: 11.07.2023 ರಂದು ಹೊರಡಿಸಿರುವ ಮಾರ್ಗಸೂಚಿಯಂತೆ) |
| 2 | ಮಧ್ಯಮ ಪ್ರಮಾಣದ ಮನೆ ಹಾನಿ (ಶೇ.20% ಕ್ಕಿಂತ ಮೇಲ್ಪಟ್ಟು ಹಾಗೂ ಶೇ.50% ಕ್ಕಿಂತ ಕಡಿಮೆ) | ಮನೆಯ ಗೋಡೆಗಳಲ್ಲಿ ಬಿರುಕು / ಸಣ್ಣ ಪ್ರಮಾಣದ ಕುಸಿತ/ ಹಾನಿ ಹಾಗೂ ಇನ್ನಿತರೆ ಹೆಚ್ಚಿನ ಪ್ರಮಾಣದ ಹಾನಿ (Repair and Patchup Work of Walls) | **ರೂ.30,000/-** (ರಾಜ್ಯ ವಿಪತ್ತು ಪರಿಹಾರ ನಿಧಿಯಿಂದ ರೂ.6,500/- ಮತ್ತು ರಾಜ್ಯ ಸರ್ಕಾರದಿಂದ ಹೆಚ್ಚುವರಿಯಾಗಿ ರೂ.23,500/-) |
| 3 | ಹೆಚ್ಚು ಪ್ರಮಾಣದ ಮನೆ ಹಾನಿ (ಶೇ.50% ಕ್ಕಿಂತ ಮೇಲ್ಪಟ್ಟು ಹಾಗೂ ಶೇ.75% ಕ್ಕಿಂತ ಕಡಿಮೆ) | ಮನೆಯ ಗೋಡೆಗಳ ಕುಸಿತ ಹಾಗೂ ಮೇಲ್ಛಾವಣಿಯ ಹಾನಿ (Reconstruction of walls and repair of roofs). | **ರೂ.50,000/-** (ರಾಜ್ಯ ವಿಪತ್ತು ಪರಿಹಾರ ನಿಧಿಯಿಂದ ರೂ.6,500/- ಮತ್ತು ರಾಜ್ಯ ಸರ್ಕಾರದಿಂದ ಹೆಚ್ಚುವರಿಯಾಗಿ ರೂ.43,500/-) |

.....2

2. ಅತಿವೃಷ್ಟಿ/ಪ್ರವಾಹದಿಂದ ಮನೆಯ ಗೋಡೆಗಳೊಂದಿಗೆ ಮೇಲ್ಛಾವಣಿ ಕುಸಿತ (Walls and roof collapse) (ಶೇ.75% ಕ್ಕಿಂತ ಹೆಚ್ಚು) ಹಾನಿಯಾದ ಮನೆಗಳನ್ನು **ಸಂಪೂರ್ಣ ಹಾನಿಯಾದ ಮನೆಯೆಂದು** ಪರಿಗಣಿಸಿ, ಸರ್ಕಾರದ ಇದೇ ಸಮಸಂಖ್ಯೆಯ ಆದೇಶ ದಿನಾಂಕ: 01-08-2024ರ ಕ್ರಮ ಸಂಖ್ಯೆ:02 ರಲ್ಲಿನ ನಿರ್ದೇಶನದಂತೆ ಕ್ರಮವಹಿಸತಕ್ಕದ್ದು.

3. ಮನೆಹಾನಿಯ ಪ್ರಮಾಣವನ್ನು ಈ ಮೇಲಿನಂತೆ ಗ್ರಾಮ ಆಡಳಿತಾಧಿಕಾರಿ, ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹಾಗೂ ಸಹಾಯಕ ಅಭಿಯಂತರರು, ಪಂಚಾಯತ್ ರಾಜ್ ಎಂಜಿನಿಯರಿಂಗ್ ವಿಭಾಗ ಇವರುಗಳು ಜಂಟಿಯಾಗಿ ಸ್ಪಷ್ಟವಾಗಿ ನಿರ್ದಿಷ್ಟಪಡಿಸುವುದು. ಇದೆ ದಿನಾಂಕ: 01.08.2024 ರ ಆದೇಶದಲ್ಲಿ ನಿಗದಿಪಡಿಸಿರುವ ಕಾಲಮಿತಿಯೊಳಗೆ ನಿಯಮಾನುಸಾರ ಅರ್ಹ ಸಂತ್ರಸ್ಥರಿಗೆ ಪರಿಹಾರ ಪಾವತಿಸಲು ಕ್ರಮವಹಿಸುವುದು.

4. ಭಾಗಶಃ ಮನೆ ಹಾನಿಗಾಗಿ ರೂ.50,000/- ಗಳ ವರೆಗೆ ಪಾವತಿಸಲಾಗುವ ಮನೆ ಹಾನಿ ಪರಿಹಾರ ಪಡೆಯುವ ಸಂತ್ರಸ್ಥರ ವಿವರಗಳಾದ, ಹಾನಿಯಾದ ಮನೆಯ ಜಿ.ಪಿ.ಎಸ್. ಛಾಯಾಚಿತ್ರ, ಆರ್.ಆರ್. ಸಂಖ್ಯೆ ಮತ್ತು ಆಧಾರ್ ಸಂಖ್ಯೆಯನ್ನು RGRHCL ಪರಿಹಾರ ತಂತ್ರಾಂಶದಲ್ಲಿ ದಾಖಲಿಸಲು ಜಿಲ್ಲಾಧಿಕಾರಿಗಳು ಕ್ರಮವಹಿಸತಕ್ಕದ್ದು.

5. ಪೂರ್ಣ ಹಾನಿಯಾದ ಮನೆಗಳಿಗೆ ರಾಜ್ಯ ವಿಪತ್ತು ಪರಿಹಾರ ನಿಧಿಯ Revised Items and Norms of Assistance ರ ಮಾರ್ಗಸೂಚಿಗಳನ್ವಯ ರೂ.1.20 ಲಕ್ಷಗಳ ಪರಿಹಾರದ ಜೊತೆಗೆ ಹೆಚ್ಚುವರಿಯಾಗಿ ವಸತಿ ಇಲಾಖೆಯು ಅನುಷ್ಠಾನಗೊಳಿಸುತ್ತಿರುವ ದೇವರಾಜ್ ಅರಸು ವಸತಿ ಯೋಜನೆಯಡಿ ಮನೆ ಹಂಚಿಕೆ ಪತ್ರವನ್ನು ಜಿಲ್ಲಾಧಿಕಾರಿಗಳ ಹಂತದಲ್ಲಿಯೇ RGRHCL ತಂತ್ರಾಂಶದ ಮೂಲಕ ವಿತರಿಸತಕ್ಕದ್ದು.

6. ಪ್ರತಿ ತಿಂಗಳು ಜಿಲ್ಲೆ, ತಾಲ್ಲೂಕು ಹಾಗೂ ಗ್ರಾಮವಾರು ಫಲಾನುಭವಿಗಳ ವಿವರ, ಪಾವತಿಸಲಾದ ಪರಿಹಾರ ಮೊತ್ತದ ವಿವರಗಳ ಮಾಹಿತಿಯನ್ನು ತಯಾರಿಸಿ, ಜಿಲ್ಲಾಧಿಕಾರಿಗಳ, ಉಪ ವಿಭಾಗಾಧಿಕಾರಿಗಳ, ಹಾಗೂ ತಹಶೀಲ್ದಾರ್ ಕಛೇರಿಯಲ್ಲಿ, ಸಂಬಂಧಪಟ್ಟ ಗ್ರಾಮ ಪಂಚಾಯತಿಗಳಲ್ಲಿ ಹಾಗೂ ರೈತ ಸಂಪರ್ಕ ಕೇಂದ್ರಗಳಲ್ಲಿ ಪ್ರಕಟಿಸತಕ್ಕದ್ದು ಮತ್ತು ಸದರಿ ವಿವರಗಳನ್ನು ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಕಡ್ಡಾಯವಾಗಿ ತಮ್ಮ ಜಾಲತಾಣದಲ್ಲಿ (ವೆಬ್‌ಸೈಟ್‌ನಲ್ಲಿ) ಪಾರದರ್ಶಕತೆಗಾಗಿ ಹಾಗೂ ಸಾರ್ವಜನಿಕರ ಮಾಹಿತಿಗಾಗಿ ಈ ಕೆಳಕಂಡ ನಮೂನೆಯಲ್ಲಿ ಪ್ರಕಟಿಸತಕ್ಕದ್ದು;

**ನಮೂನೆ-1**

**ಮುಂಗಾರು 2024 ರಲ್ಲಿ ಭಾಗಶ: ಹಾನಿಯಾದ ಮನೆಗಳ ವಿವರ**

| ಕ್ರ. ಸಂ. | ನೆರೆ ಸಂತ್ರಸ್ಥರ / ಫಲಾನುಭವಿಯ ಹೆಸರು | ಪೂರ್ಣ ವಿಳಾಸ | ಗ್ರಾಮ , ಗ್ರಾಮ ಪಂಚಾಯತಿ, ಹೋಬಳಿ , ತಾಲ್ಲೂಕು , ಜಿಲ್ಲೆ | ಮನೆ ಹಾನಿಗೆ ಪಾವತಿಸಲಾದ ಪರಿಹಾರದ ಮೊತ್ತ | | |
|---|---|---|---|---|---|---|
| 1 | 2 | 3 | 4 | 5 (15%-20% ಮನೆ ಹಾನಿ) | 6 (20%-50% ಮನೆ ಹಾನಿ) | 7 (50%-75% ಮನೆ ಹಾನಿ) |

.....3

**ನಮೂನೆ-2**

**ಮುಂಗಾರು 2024 ರಲ್ಲಿ ಪೂರ್ಣ ಹಾನಿಯಾದ ಮನೆಗಳ ವಿವರ**

| ಕ್ರ. ಸಂ. | ನೆರೆ ಸಂತ್ರಸ್ಥರ / ಫಲಾನುಭವಿಯ ಹೆಸರು | ಪೂರ್ಣ ವಿಳಾಸ | ಗ್ರಾಮ, ಗ್ರಾಮ ಪಂಚಾಯತಿ, ಹೋಬಳಿ, ತಾಲ್ಲೂಕು, ಜಿಲ್ಲೆ | ಮನೆ ಹಾನಿಗೆ ಪಾವತಿಸಲಾದ ಪರಿಹಾರದ ಮೊತ್ತ | ಹೊಸ ಮನೆ ಹಂಚಿಕೆ ಮಾಡಿದ ಆದೇಶದ ಸಂಖ್ಯೆ / ದಿನಾಂಕ |
|---|---|---|---|---|---|
| 1 | 2 | 3 | 4 | 5 | 6 |

**ದಿನಾಂಕ:07.08.2024ರಂದು ಇದೇ ಸಮ ಸಂಖ್ಯೆಯಲ್ಲಿ ಹೊರಡಿಸಲಾದ ಸರ್ಕಾರದ ಸೇರ್ಪಡೆ ಆದೇಶವನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಿಂಪಡೆಯಲಾಗಿದೆ.**

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

Mukhtar Pasha. H.G 8/8/2024

**(ಮುಕ್ತಾರ್ ಪಾಷ. ಹೆಚ್.ಜಿ.)**
ಸರ್ಕಾರದ ಅಧೀನ ಕಾರ್ಯದರ್ಶಿ,
ಕಂದಾಯ ಇಲಾಖೆ,
(ವಿಪತ್ತು ನಿರ್ವಹಣೆ ಮತ್ತು ಸೇವೆಗಳು-3).

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ, ಪಿ.ಬಿ.ನಂ. 5329/5369 ಪಾರ್ಕ್ ಹೌಸ್ ರಸ್ತೆ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (E&RSA), ಕರ್ನಾಟಕ, ಪಿ.ಬಿ.ನಂ.5398, ನ್ಯೂ ಬಿಲ್ಡಿಂಗ್ 'ಆಡಿಟ್ ಭವನ' ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (G&SSA), ಕರ್ನಾಟಕ, ಪಿ.ಬಿ.ನಂ.5398, ನ್ಯೂ ಬಿಲ್ಡಿಂಗ್ 'ಆಡಿಟ್ ಭವನ' ಬೆಂಗಳೂರು.
4. ಆಯುಕ್ತರು, ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ, ಬಹುಮಹಡಿ ಕಟ್ಟಡ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ರಾಜೀವ್ ಗಾಂಧಿ ವಸತಿ ನಿಗಮ ನಿಯಮಿತ, ಬೆಂಗಳೂರು.
6. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
7. ಎಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಜಿಲ್ಲಾ ಪಂಚಾಯತ್.
8. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
9. ಜಂಟಿ ನಿರ್ದೇಶಕರು, ಖಜಾನೆ ಆಯುಕ್ತಾಲಯ, ಕೆಪಿಸಿಎಲ್ ಹಸಿರು ಕಟ್ಟಡ, ಅರಮನೆ ರಸ್ತೆ, ಬೆಂಗಳೂರು.
10. ಉಪ ನಿರ್ದೇಶಕರು, ಖಜಾನೆ ನೆಟ್ ವರ್ಕ್ ಮ್ಯಾನೇಜ್ಮೆಂಟ್ ಸೆಂಟರ್, ಖನಿಜ ಭವನ, ಬೆಂಗಳೂರು.

**ಪ್ರತಿ:**

1. ಮಾನ್ಯ ಮುಖ್ಯ ಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಮಾನ್ಯ ಕಂದಾಯ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಮಾನ್ಯ ವಸತಿ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
4. ಸರ್ಕಾರದ ಮುಖ್ಯ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು ರವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ (ವಿ.ನಿ) ರವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ವಸತಿ ಇಲಾಖೆ, ಇವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
8. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ವೆಚ್ಚ) ರವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
9. ಸರ್ಕಾರದ ಉಪ ಕಾರ್ಯದರ್ಶಿ, ಕಂದಾಯ ಇಲಾಖೆ (ವಿ.ನಿ ಮತ್ತು ನೋಂ & ಮು) ರವರ ಆಪ್ತ ಸಹಾಯಕರು, ಬಹುಮಹಡಿ ಕಟ್ಟಡ, ಬೆಂಗಳೂರು.
10. ಕಂದಾಯ ಇಲಾಖೆ (ವಿ.ನಿ) ಲೆಕ್ಕ ಪತ್ರ ಶಾಖೆ.
11. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.